ಆ) ಕಾರಂಜಾ ಸಂತ್ರಸ್ತರಿಗೆ ಸೈಟುಗಳನ್ನು ನೀಡಲು ಯಾವುದೇ ಕಾನೂನಿನ ತೊಡಕುಗಳಿರುವುದಿಲ್ಲ.

ಇ) ಕಾರಂಜಾ ಸಂತ್ರಸ್ತರಿಗೆ ಯಾವುದೇ ಜಮೀನು ನೀಡುವ ಉದ್ದೇಶವಿರುವುದಿಲ್ಲ. ಆದರೆ ಯೋಜನೆಯಡಿ ಮುಳುಗಡೆಗೊಂಡ ಜಮೀನಿಗಾಗಿ ಪರಿಹಾರಧನವನ್ನು ಮಾತ್ರ ನೀಡಲಾಗಿರುತ್ತದೆ.

ಒಳಾಂಗಣ ಕ್ರೀಡಾಂಗಣ ನಿರ್ಮಾಣ

889 (446); ಶ್ರೀ ಬಾದರ್ಲಿ ಹಂಪನಗೌಡ (ಸಿಂಧನೂರು)

ಅ) ರಾಜ್ಯದಲ್ಲಿ ಒಟ್ಟು ಎಷ್ಟು ಒಳಾಂಗಣ ಕ್ರೀಡಾಂಗಣಗಳನ್ನು ನಿರ್ಮಾಣ ಮಾಡಲಾಗುವುದು;

ಅವುಗಳಿಂದಾಗಿ ಕೇಂದ್ರ ಮತ್ತು ರಾಜ್ಯ ಸರ್ಕಾರದಿಂದ ಈಗಾಗಲೇ ಎಷ್ಟು ಅನುದಾನ ಬಿಡುಗಡೆಯಾಗಿದೆ.

ಆ) ಸಿಂಧನೂರು ಪಟ್ಟಣದಲ್ಲಿ ಕೇಂದ್ರ ಮತ್ತು ರಾಜ್ಯ ಸರ್ಕಾರದ ಅನುದಾನದಲ್ಲಿ, ಒಳಾಂಗಣ ಕ್ರೀಡಾಂಗಣ ಮತ್ತು ಸಿಂಥೆಟಿಕ್ ಅಥ್ಲೆಟಿಕ್ ಟ್ರ್ಯಾಕ್ ನಿರ್ಮಾಣ ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

ಇ) ಹಾಗಿದ್ದಲ್ಲಿ ಪ್ರಸ್ತಾವನೆ ಯಾವ ಹಂತದಲ್ಲಿದೆ;

ಯಾವಾಗ ನಿರ್ಮಾಣ ಕಾರ್ಯ ಪ್ರಾರಂಭಿಸಲಾಗುವುದು; (ವಿವರ ನೀಡುವುದು)?

ಶ್ರೀ ಕೆ. ಅಭಯಚಂದ್ರ (ಮಾನ್ಯ ಯುವಜನ ಸೇವಾ ಹಾಗೂ ಮೀನುಗಾರಿಕೆ ಸಚಿವರು)

ಅ) 2014–15ನೇ ಸಾಲಿನಲ್ಲಿ ರಾಜ್ಯದಲ್ಲಿ ಒಟ್ಟು 36 ಒಳಾಂಗಣ ಕ್ರೀಡಾಂಗಣಗಳನ್ನು ನಿರ್ಮಾಣ ಮಾಡಲಾಗುವುದು.

ಕೇಂದ್ರ ಸರ್ಕಾರದ ನೂತನ ಯೋಜನೆಯಾದ ರಾಜೀವ್‌ಗಾಂಧಿ ಖೇಲ್ ಅಭಿಯಾನ್ (ಆರ್.ಜಿ.ಕೆ.ಎ) ಯೋಜನೆಯಡಿಯಲ್ಲಿ ಒಟ್ಟು 36 ಒಳಾಂಗಣ ಕ್ರೀಡಾಂಗಣಗಳನ್ನು ನಿರ್ಮಿಸಲು ₹ 28.80 ಕೋಟಿ ಅನುದಾನಕ್ಕೆ ಕೇಂದ್ರ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಲಾಗಿದ್ದು, ಇಲ್ಲಿಯವರೆಗೆ ಯಾವುದೇ ಅನುದಾನ ಬಿಡುಗಡೆಯಾಗಿರುವುದಿಲ್ಲ.

ಆ) ಸಿಂಧನೂರು ಪಟ್ಟಣದಲ್ಲಿ ಕೇಂದ್ರ ಸರ್ಕಾರದ ಆರ್.ಜಿ.ಕೆ.ಎ ಅನುದಾನದಲ್ಲಿ ಒಳಾಂಗಣ ಕ್ರೀಡಾಂಗಣವನ್ನು ನಿರ್ಮಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆ.

ಸಿಂಧನೂರು ಪಟ್ಟಣದಲ್ಲಿ ಕೇಂದ್ರ ಮತ್ತು ರಾಜ್ಯ ಸರ್ಕಾರದ ಅನುದಾನದಲ್ಲಿ, ಸಿಂಥೆಟಿಕ್ ಅಥ್ಲೆಟಿಕ್ ಟ್ರ್ಯಾಕ್ ನಿರ್ಮಾಣ ಮಾಡುವ ಯಾವುದೇ ಪ್ರಸ್ತಾವನೆ ಸರ್ಕಾರದ ಮುಂದಿರುವುದಿಲ್ಲ.

ಇ) ಒಳಾಂಗಣ ಕ್ರೀಡಾಂಗಣ ನಿರ್ಮಿಸುವ ಪ್ರಸ್ತಾವನೆ ಕೇಂದ್ರ ಸರ್ಕಾರದ ಅನುಮೋದನೆ ಹಂತದಲ್ಲಿದೆ.

ಕೇಂದ್ರ ಸರ್ಕಾರದಿಂದ ಅನುಮೋದನೆಯಾದ ನಂತರ ನಿರ್ಮಾಣ ಕಾರ್ಯ ಪ್ರಾರಂಭಿಸಲಾಗುವುದು.

ಅರಣ್ಯ ಇಲಾಖೆಯಿಂದ ಕೈಗೊಂಡಿರುವ ಕಾಮಗಾರಿಗಳು

891 (445); ಶ್ರೀ ಬಾಲಕೃಷ್ಣ.ಹೆಚ್.ಸಿ. (ಮಾಗಡಿ)

ಅ) ಮಾಗಡಿ ಕ್ಷೇತ್ರ ವ್ಯಾಪ್ತಿಯಲ್ಲಿ ಕಳೆದ 3 ವರ್ಷಗಳಲ್ಲಿ ಅರಣ್ಯ ಇಲಾಖೆಯಿಂದ ಕೈಗೊಂಡಿರುವ ಕಾಮಗಾರಿಗಳು ಎಷ್ಟು; ಅವು ಯಾವುವು;

ಆ) ಯಾವ ಯಾವ ಕಾಮಗಾರಿಗಳಿಗೆ ಎಷ್ಟೆಷ್ಟು ಹಣವನ್ನು ಬಿಡುಗಡೆ ಮಾಡಲಾಗಿರುತ್ತದೆ.

ಇ) ಎಷ್ಟು ಹಣ ಖರ್ಚಾಗಿದೆ: ಹಾಗೂ ಉಳಿಕೆಯಾಗಿದೆ: ಎಷ್ಟು ಕಾಮಗಾರಿಗಳು ಪೂರ್ಣಗೊಂಡಿರುತ್ತವೆ: ಪೂರ್ಣಗೊಳ್ಳದೆ ಇರುವ ಕಾಮಗಾರಿಗಳು ಯಾವುವು: (ಸಂಪೂರ್ಣ ವಿವರ ನೀಡುವುದ)?